**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 01-01-2016ಕ್ಕೂ ಪೂರ್ವದಲ್ಲಿ ನಿವೃತ್ತರಾದ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನಿವೃತ್ತ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:**
1. ಸ.ಆ ಸಂಖ್ಯೆ: ಆಇ 2 ಎಸ್‌ಆರ್‌ಪಿ 2019 ದಿನಾಂಕ 03-05-2019.
2. ಸ.ಆ ಸಂಖ್ಯೆ: ಆಇ 17 ಎಸ್‌ಆರ್‌ಪಿ 2019 ದಿನಾಂಕ 02-11-2019.
3. ಸ.ಆ ಸಂಖ್ಯೆ: ಆಇ 10 ಎಸ್‌ಆರ್‌ಪಿ 2020 ದಿನಾಂಕ 05-05-2020
4. ಸ.ಆ ಸಂಖ್ಯೆ: ಆಇ 20 ಎಸ್‌ಆರ್‌ಪಿ 2021 ದಿನಾಂಕ 19-08-2021
5. ಸ.ಆ ಸಂಖ್ಯೆ: ಆಇ 32 ಎಸ್‌ಆರ್‌ಪಿ 2021 ದಿನಾಂಕ 08-11-2021
6. ಸ.ಆ ಸಂಖ್ಯೆ: ಆಇ 25 ಎಸ್‌ಆರ್‌ಪಿ 2022 ದಿನಾಂಕ 09-05-2022
7. ಭಾರತ ಸರ್ಕಾರದ ದಿನಾಂಕ 12.10.2022ರ ಅಧಿಕೃತ ಜ್ಞಾಪನ ಸಂಖ್ಯೆ:1/3(1)/2008-E.II(B)

**ಸರ್ಕಾರಿ ಆದೇಶ ಸಂಖ್ಯೆ: ಆಇ 1 ಎಸ್‌ಆರ್‌ಪಿ 2023**

**ಬೆಂಗಳೂರು, ದಿನಾಂಕ: 21ನೇ ಜನವರಿ 2023**

ದಿನಾಂಕ 01-01-2016ರ ಪೂರ್ವದಲ್ಲಿ ನಿವೃತ್ತರಾದ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನಿವೃತ್ತ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಮೂಲ ನಿವೃತ್ತಿ ವೇತನ / ಕುಟುಂಬ ನಿವೃತ್ತಿ ವೇತನದ **ಶೇಕಡ 203 ರಿಂದ ಶೇಕಡ 212ಕ್ಕೆ 1ನೇ ಜುಲೈ 2022**ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ ನಿವೃತ್ತಿ ವೇತನವು ಮೂಲ ನಿವೃತ್ತಿ ವೇತನ / ಕುಟುಂಬ ನಿವೃತ್ತಿ ವೇತನವನ್ನು ಮಾತ್ರ ಒಳಗೊಳ್ಳುತ್ತದೆ.

3. ಮೂಲ ನಿವೃತ್ತಿ ವೇತನ / ಕುಟುಂಬ ನಿವೃತ್ತಿ ವೇತನವು ಮೂಲ ಪಿಂಚಣಿ ಎಂದು ಪರಿಗಣಿಸಲ್ಪಡದ ಯಾವುದೇ ಉಪಲಬ್ಧಗಳನ್ನು ಒಳಗೊಳ್ಳತಕ್ಕದ್ದಲ್ಲ.

4. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

5. ಜನವರಿ-2023ರ ಪಿಂಚಣಿ / ನಿವೃತ್ತಿ ವೇತನದ ಬಟವಾಡೆಗೂ ಮೊದಲು ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು ಪಾವತಿಸತಕ್ಕದ್ದಲ್ಲ.

6. 2016ರ ಪರಿಷ್ಕೃತ ಎನ್.ಜೆ.ಪಿ.ಸಿ ವೇತನ ಶ್ರೇಣಿಗಳ ನಿವೃತ್ತ ನ್ಯಾಯಾಂಗ ಅಧಿಕಾರಿಗಳಿಗೆ ಈ ಆದೇಶವು ಅನ್ವಯಿಸುವುದಿಲ್ಲ.

7. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ಪಿಂಚಣಿ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Jayashree

(ಜಯಶ್ರೀ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ(ಪಿ.ಬಿ. ನಂ.5398), ಬೆಂಗಳೂರು.